**Akashvani : Bangalore**
**Regional Bulletin In Kannada**
**31.08.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**31.08.2026 / 14.30 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ನೇಪಾಳ ಪ್ರವಾಹದಲ್ಲಿ ರಾಜ್ಯದ ೨೬ ಮಂದಿ ನಾಪತ್ತೆ - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾಹಿತಿ**

**೨. ಬಿಡಿಎ ವತಿಯಿಂದ ನಿರ್ಮಿಸಲಾಗಿರುವ ಶಿವರಾಮ ಕಾರಂತ ಬಡಾವಣೆ ಭೂಮಾಲೀಕರಿಗೆ ಸರ್ಕಾರದಿಂದ ಪರಿಹಾರ ವಿತರಣೆ**

**೩. ಇ-ಸ್ವತ್ತು, ತೆರಿಗೆ ನಿರ್ಧಾರ, ಕಾಮಗಾರಿ ಕುರಿತ ದೂರು ದಾಖಲಿಸಲು ಆನ್‌ಲೈನ್ ವ್ಯವಸ್ಥೆ ಜಾರಿಗೆ - ಸಚಿವ ಈಶ್ವರ್ ಬಿ ಖಂಡ್ರೆ**

**೪. ಕೆಪಿಎಸ್‌ಸಿ ಅಕ್ರಮದಲ್ಲಿ ತಮ್ಮ ಪಾತ್ರ ಸಾಬೀತಾದರೆ ರಾಜಕೀಯ ನಿವೃತ್ತಿ- ಗೃಹ ಸಚಿವ ಪ್ರಿಯಾಂಕ್ ಖರ್ಗೆ**

**೫. ಸೆಪ್ಟಂಬರ್ ಐದರಿಂದ ರಾಜ್ಯಾದ್ಯಂತ 'ಪ್ರಜಾಸೇವಾ ಅಭಿಯಾನ' ; ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳುವಂತೆ ಸರ್ಕಾರ ಮನವಿ**

**<><*<><>*><>**

ನೇಪಾಳದಲ್ಲಿ ಸಂಭವಿಸಿರುವ ಭೀಕರ ಪ್ರವಾಹ ಹಾಗೂ ಭೂಕುಸಿತದಿಂದಾಗಿ ರಾಜ್ಯದ ೨೬ ಮಂದಿ ನಾಪತ್ತೆಯಾಗಿದ್ದಾರೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇವರಲ್ಲಿ ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಯ ನಿವಾಸಿಗಳು ಸೇರಿದ್ದಾರೆ. ಎಂದು ಮಾಹಿತಿ ನೀಡಿದ್ದಾರೆ. ೧೩ ಮಂದಿ ಕುಟುಂಬಸ್ಥರು ಪತ್ತೆಯಾಗಿದ್ದು, ಇನ್ನು ೧೩ ಮಂದಿಗಾಗಿ ಶೋಧ ಮುಂದುವರಿದಿದೆ ಎಂದು ಹೇಳಿದ್ದಾರೆ. ಅಧಿಕಾರಿಗಳು, ನಾಪತ್ತೆಯಾಗಿರುವ ಕುಟುಂಬಸ್ಥರೊಂದಿಗೆ ಸಂಪರ್ಕದಲ್ಲಿದ್ದಾರೆ ಎಂದು ತಿಳಿಸಿದ್ದಾರೆ.

**<><*<><>*><>**

ಬಿಡಿಎ ವತಿಯಿಂದ ನಿರ್ಮಿಸಲಾಗಿರುವ ಡಾ.ಕೆ.ಶಿವರಾಮ ಕಾರಂತ ಬಡಾವಣೆ ಭೂಮಿ ಮಾಲೀಕರಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಭೂ ಪರಿಹಾರ ವಿತರಣೆ ಮಾಡಿದರು. ಬೆಂಗಳೂರಿನ ನೆಹರು ತಾರಾಲಯದಲ್ಲಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭೂಗ್ಯಾರಂಟಿ ಜಾರಿಗೊಳಿಸಲು ಸರ್ಕಾರ ಬದ್ಧವಿದೆ ಎಂದು ತಿಳಿಸಿದ್ದಾರೆ. ಭೂಮಿ ನೀಡಿದವರಿಗೆ ಪರಿಹಾರ ನೀಡುವುದರ ಜೊತೆಗೆ ಅವರ ಜಮೀನಿನಲ್ಲಿಯೇ ನಿವೇಶನ ನೀಡಲಾಗುವುದು ಎಂದು ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಸಚಿವ ಕೃಷ್ಣ ಬೈರೇಗೌಡ, ಬಿಡಿಎ ಅಧ್ಯಕ್ಷ

ಎನ್.ಎ.ಹ್ಯಾರಿಸ್, ಶಾಸಕರಾದ ಎಸ್.ಆರ್.ವಿಶ್ವನಾಥ್, ಎಸ್.ಮುನಿರಾಜು, ಬಿಡಿಎ ಆಯುಕ್ತ ಮಣಿವಣ್ಣನ್ ಮತ್ತಿತರರು ಉಪಸ್ಥಿತರಿದ್ದರು.

**<><*<><>*><>**

ಗ್ರಾಮ ಪಂಚಾಯತಿ ಸೇವೆಗಳಿಗೆ ಸಂಬಂಧಿಸಿದಂತೆ ತಮ್ಮ ಅಹವಾಲುಗಳನ್ನು ದಾಖಲಿಸಲು ಗ್ರಾಮೀಣ ಭಾಗದ ಜನರಿಗೆ ಅನುವಾಗುವಂತೆ ಡ್ಯಾಷ್ ಬೋರ್ಡ್ ಆಧಾರಿತ 'ದೂರು ದಾಖಲು ಇತ್ಯರ್ಥಕ್ಕೆ ಆನ್ ಲೈನ್ ವ್ಯವಸ್ಥೆ' ರೂಪಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ. ಈ ಸಂಬಂಧ ಇಲಾಖೆಯ ಕಾರ್ಯದರ್ಶಿಗೆ ಲಿಖಿತ ಸೂಚನೆ ನೀಡಿರುವ ಸಚಿವರು, ಇ-ಸ್ವತ್ತು, ತೆರಿಗೆ ನಿರ್ಧಾರ, ಸಾಮಾಜಿಕ ಅರಣ್ಯೀಕರಣ, ಗ್ರಾಮಪಂಚಾಯತ್ ವ್ಯಾಪ್ತಿಯ ಕೆರೆ ನಿರ್ವಹಣೆ, ಕೆರೆ ಒತ್ತುವರಿ, ವಿಬಿಜಿ ರಾಮ್ ಜಿ, ಸೇರಿದಂತೆ ಯಾವುದೇ ಅಹವಾಲನ್ನು ದಾಖಲಿಸಲು ಮತ್ತು ಅದಕ್ಕೆ ತಕ್ಷಣ ಸ್ಪಂದಿಸಲು ಈ ವ್ಯವಸ್ಥೆ ಜಾರಿಗೆ ತರುವಂತೆ ನಿರ್ದೇಶನ ನೀಡಿದ್ದಾರೆ. ರಾಜ್ಯದ ಸುಮಾರು ಅರ್ಧದಷ್ಟು ಜನಸಂಖ್ಯೆಯೊಂದಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ನೇರ ಸಂಪರ್ಕ ಹೊಂದಿದೆ. ಈ ಹಿನ್ನೆಲೆಯಲ್ಲಿ ಕುಂದುಕೊರತೆಗೆ ಸ್ಪಂದಿಸುವುದು ಇಲಾಖೆಯ ಜವಾಬ್ದಾರಿಯಾಗಿದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ. ಗ್ರಾಮೀಣ ಭಾಗದ ಜನರು ಈ ಸಂಬಂಧ ವಿಡಿಯೋ ಮತ್ತು ಫೋಟೋ ಸಹಿತ ದೂರು ದಾಖಲಿಸಬಹುದಾಗಿದೆ.

**<><*<><>*><>**

ಕೆಪಿಎಸ್‌ಸಿ ಹಗರಣದಲ್ಲಿ ತಮ್ಮ ಪಾತ್ರವಿರುವುದು ಸಾಬೀತಾದರೆ, ರಾಜಕೀಯ ನಿವೃತ್ತಿಪಡೆಯುವುದಾಗಿ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಘೋಷಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಹಾಗೂ ಜೆಡಿಎಸ್ ನಾಯಕರು ರಾಜಕೀಯ ನಿವೃತ್ತಿ ಪಡೆಯುತ್ತಾರೆಯೇ ಎಂದು ಪ್ರಶ್ನಿಸಿದ್ದಾರೆ. ಸರ್ಕಾರಿ ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಹೊರಡಿಸುವುದು, ಪರೀಕ್ಷೆ ನಡೆಸುವುದು, ತಾತ್ಕಾಲಿಕ ಹಾಗೂ ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸುವುದು ಸೇರಿದಂತೆ ಎಲ್ಲಾ ಪ್ರಕ್ರಿಯೆಗಳನ್ನು ಕೆಪಿಎಸ್‌ಸಿಯೇ ನಿರ್ವಹಿಸುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಕೆಪಿಎಸ್‌ಸಿಯ ಅಧೀನದಲ್ಲಿರುವ ಒಎಂಆರ್ ಶೀಟ್‌ಗಳಲ್ಲಿ ಅಕ್ರಮ ನಡೆದಿದ್ದರೆ, ಅದಕ್ಕೆ ಸಚಿವರು ಹೇಗೆ ಹೊಣೆಯಾಗುತ್ತಾರೆ ಎಂದು ಪ್ರಶ್ನಿಸಿದ್ದಾರೆ.

**<><*<><>*><>**

ಗೃಹ ಲಕ್ಷ್ಮೀ ಯೋಜನೆಯಡಿ ಫಲಾನುಭವಿಗಳ ಮರು ಪರಿಶೀಲನೆ ಕಾರ್ಯವನ್ನು ಕೈಗೊಳ್ಳಲು ರಾಜ್ಯ ಸರ್ಕಾರ ಸಿದ್ಧತೆ ನಡೆಸಿದೆ. ಇದರಿಂದ ಅನರ್ಹ ಫಲಾನುಭವಿಗಳನ್ನು ಹೊರಗಿಡಲು ಹಾಗೂ ನಿಜವಾದ ಫಲಾನುಭವಿಗಳಿಗೆ ಯೋಜನೆ ತಲುಪಲು ಸಾಧ್ಯವಾಗಲಿದೆ ಎಂದು ಸರ್ಕಾರ ತಿಳಿಸಿದೆ. ಮರುಪರಿಶೀಲನಾ ಕಾರ್ಯಕ್ಕಾಗಿ ಸುಮಾರು ೧೦ ಕೋಟಿ ರೂಪಾಯಿಗಳನ್ನು ಮೀಸಲಿಡಲಾಗಿದೆ. ಸರ್ಕಾರದ ಸಿಬ್ಬಂದಿ ಫಲಾನುಭವಿಗಳ ನಿವಾಸಗಳಿಗೆ ಭೇಟಿ ನೀಡಿ, ಮೀಸಲಾದ ಅರ್ಜಿಯ ಮೂಲಕ ವಿವರಗಳನ್ನು ಸಂಗ್ರಹಿಸಲಿದ್ದಾರೆ. ಮುಖ ದೃಢೀಕರಣ ಹಾಗೂ ಬಯೋಮೆಟ್ರಿಕ್ ಪರಿಶೀಲನೆಯನ್ನು ಪ್ರಕ್ರಿಯೆಯ ಭಾಗವಾಗಿ ಬಳಸಲು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ನಿರ್ಧರಿಸಿದೆ. ಗೃಹ ಲಕ್ಷ್ಮೀ ಯೋಜನೆ ಪ್ರಾರಂಭವಾದ ಮೂರು ವರ್ಷಗಳ ಬಳಿಕ ಸರ್ಕಾರ ಪರಿಶೀಲನಾ ಕಾರ್ಯ ಕೈಗೆತ್ತಿಕೊಂಡಿದೆ.

<><*<><>*><>

ರಾಜ್ಯಾದ್ಯಂತ ಆರಂಭವಾಗಲಿರುವ 'ಪ್ರಜಾಸೇವಾ ಅಭಿಯಾನ'ಕ್ಕೆ ಸೆಪ್ಟಂಬರ್ ೫ರಂದು ವಿಜಯನಗರ ಜಿಲ್ಲೆಯ ಕೂಡ್ಲಿಗಿಯಲ್ಲಿ ಚಾಲನೆ ದೊರೆಯಲಿದೆ. ಸಾರ್ವಜನಿಕರು ತಮ್ಮ ಸಣ್ಣಪುಟ್ಟ ಸಮಸ್ಯೆಗಳಿಗಾಗಿ ಕಚೇರಿಗಳಿಗೆ ಅಲೆಯುವುದನ್ನು ತಪ್ಪಿಸಲು ಸರ್ಕಾರ ಈ ಸೇವೆ ಆರಂಭಿಸಿದೆ. ಸಾರ್ವಜನಿಕರ ಕುಂದು-ಕೊರತೆಗಳನ್ನು ನೇರವಾಗಿ ಆಲಿಸಿ, ಸ್ಥಳದಲ್ಲೇ ಅಥವಾ ನಿರ್ಧಿಷ್ಟ ಅವಧಿಯಲ್ಲಿ ಪರಿಹಾರ ಒದಗಿಸುವ ಏಕೀಕೃತ ವ್ಯವಸ್ಥೆ ಇದಾಗಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪ್ರಜಾ ಸೇವಾ ಅಭಿಯಾನವನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಎಲ್ಲಾ ಇಲಾಖೆ ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು ಎಂದು ಜಿಲ್ಲಾಧಿಕಾರಿ ಡಾ. ಕೆ.ಎನ್.ಅನುರಾಧ ಸೂಚನೆ ನೀಡಿದ್ದಾರೆ. ಕೋಲಾರ ಜಿಲ್ಲೆಯಲ್ಲಿ ಪ್ರಜಾ ಸೇವಾ ಅಭಿಯಾನವನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಎಂ.ಆರ್.ರವಿಕುಮಾರ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಜಿಲ್ಲೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಾರ್ವಜನಿಕರು ತಮ್ಮ ಕುಂದು ಕೊರತೆ, ಅಹವಾಲುಗಳನ್ನು ಸಲ್ಲಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದ್ದಾರೆ.

<><*<><>*><>

ಕೆಪಿಎಸ್‌ಸಿ ಪಶು ವೈದ್ಯಾಧಿಕಾರಿಗಳ ಹಗರಣಗಳ ಸಂಬಂಧಿಸಿದಂತೆ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಅವರನ್ನು ಇಂದು ಅಪರಾಧ ತನಿಖಾ ಇಲಾಖೆ -ಸಿಐಡಿ ಅಧಿಕಾರಿಗಳು ನ್ಯಾಯಾಲಯಕ್ಕೆ ಹಾಜರುಪಡಿಸಲಿದ್ದಾರೆ. ಹೆಚ್ಚಿನ ವಿಚಾರಣೆಗಾಗಿ ಸಿಐಡಿ ಅಧಿಕಾರಿಗಳು, ೧೪ ದಿನಗಳ ಕಾಲ ಕಸ್ಟಡಿಗೆ ಕೋರುವ ಸಾಧ್ಯತೆಯಿದೆ. ಈ ನಡುವೆ ಹಗರಣಕ್ಕೆ ಸಂಬಂಧಿಸಿದಂತೆ ಬೀದರ್ ಜಿಲ್ಲೆಯ ಬಾಲ್ಕಿ ತಾಲೂಕಿನ ದೊನಗಾಪುರ ಗ್ರಾಮದಲ್ಲಿರುವ ಬಿಜೆಪಿ ನಾಯಕ ಬಸವರಾಜ್ ಕನ್ನಾಳೆ ನಿವಾಸದಲ್ಲಿ ಸಿಐಡಿ ಅಧಿಕಾರಿಗಳು ಸಿಐಡಿ ಅಧಿಕಾರಿಗಳು ಶೋಧ ನಡೆಸಿದ್ದಾರೆ. ಒಎಂಆರ್ ಉತ್ತರಪತ್ರಿಕೆಗಳ ತಿರುಚುವಿಕೆ, ಮೌಲ್ಯಮಾಪನ ಪ್ರಕ್ರಿಯೆಯಲ್ಲಿನ ಅಕ್ರಮಗಳು ಮತ್ತು ಅಭ್ಯರ್ಥಿಗಳ ನೇಮಕಾತಿಗೆ ಅನುಕೂಲಮಾಡಿಕೊಡುವಲ್ಲಿ ಅಧಿಕಾರಿಗಳು ಮತ್ತು ಮಧ್ಯವರ್ತಿಗಳು ಭಾಗಿಯಾಗಿರುವ ಆರೋಪಗಳು ಕುರಿತು ಸಿಐಡಿ ತನಿಖೆ ನಡೆಸುತ್ತಿದೆ.

<><*<><>*><>

ಮಂಡ್ಯ ಜಿಲ್ಲಾ ಕಾರಾಗೃಹದಲ್ಲಿ ವಿಚಾರಣಾಧೀನ ಕೈದಿಗೆ ರಾಜಾತಿಥ್ಯ ನೀಡಿದ ಹಾಗೂ ಜೈಲಿನ ಕೊಠಡಿಗಳಲ್ಲಿ ಖೈದಿಗಳಿಗೆ ಸೌಲಭ್ಯ ಒದಗಿಸಲು ಹಣ ನಿಗದಿಪಡಿಸಿದ ಗಂಭೀರ ಆರೋಪಗಳ ಹಿನ್ನೆಲೆಯಲ್ಲಿ, ಕಾರಾಗೃಹ ಅಧೀಕ್ಷಕಿ ಶಾಂತಮ್ಮ ಅವರನ್ನು ಬಳ್ಳಾರಿ ಕೇಂದ್ರ ಕಾರಾಗೃಹಕ್ಕೆ ವರ್ಗಾವಣೆ ಮಾಡಿ ಕಾರಾಗೃಹ ಡಿಜಿಪಿ ಅಲೋಕ್ ಕುಮಾರ್ ಆದೇಶ ಹೊರಡಿಸಿದ್ದಾರೆ. ಭೂ ಅಕ್ರಮ ಪ್ರಕರಣದಲ್ಲಿ ಬಂಧನಕ್ಕೊಳಗಾಗಿದ್ದ ಎಡಿಎಲ್‌ಆರ್ ಅಧಿಕಾರಿಯನ್ನು ಯಾವುದೇ ಗಂಭೀರ ಕಾಯಿಲೆ ಇಲ್ಲದಿದ್ದರೂ ಬೆನ್ನು ನೋವಿನ ನೆಪವೊಡ್ಡಿ ಮಂಡ್ಯದ ಮಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ನ್ಯಾಯಾಲಯಕ್ಕೆ ಯಾವುದೇ ಮಾಹಿತಿ ನೀಡದೆ ಕೈದಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಮಂಡ್ಯ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಸಿ.ಚಂದ್ರಶೇಖರ್ ಮಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿದಾಗ ಈ ವಿಚಾರ ಬೆಳಕಿಗೆ ಬಂದಿತ್ತು.

<><*<><>*><>

ಎಥೆನಾಲ್ ತಯಾರಿಕರಿಂದ ಮೆಕ್ಕೆಜೋಳಕ್ಕೆ ಹೆಚ್ಚುತ್ತಿರುವ ಬೇಡಿಕೆಯ ಹಿನ್ನೆಲೆಯಲ್ಲಿ ಕೋಳಿ ಸಾಕಾಣಿಕೆ ಆಹಾರದ ವೆಚ್ಚದಲ್ಲಿ ಏರಿಕೆಯಾಗಿದೆ. ಇದು ಕೋಳಿ ಮಾಂಸ ಹಾಗೂ ಮೊಟ್ಟೆ ಉತ್ಪಾದನೆಯ ಮೇಲೆ ಆರ್ಥಿಕ ಒತ್ತಡ ಉಂಟುಮಾಡಿದೆ ಎಂದು ಕೋಳಿ ಸಾಕಾಣಿಕೆದಾರರ ಒಕ್ಕೂಟ ತಿಳಿಸಿದೆ. ಕರ್ನಾಟಕ ಮತ್ತು ಬಿಹಾರದಲ್ಲಿ ಬೆಳೆಯುವ ಮೆಕ್ಕೆಜೋಳದ ಮೇಲೆ ಕೋಳಿಸಾಕಾಣೆ ಉದ್ಯಮವು ಹೆಚ್ಚು ಅವಲಂಬಿತವಾಗಿದೆ. ಕೃತಕ ಕೊರತೆಯನ್ನು ಸೃಷ್ಟಿಸಲು ಮತ್ತು ಬೆಲೆಗಳನ್ನು ಹೆಚ್ಚಿಸಲು ಕೆಲವು ವ್ಯಾಪಾರಿಗಳು ಮಾರುಕಟ್ಟೆಯಿಂದ ದಾಸ್ತಾನುಗಳನ್ನು ತಡೆಹಿಡಿಯುತ್ತಿದ್ದಾರೆ ಎಂದು ರೈತರು ಆರೋಪಿಸಿದ್ದಾರೆ.

**<><*<><>*><>**

ಶ್ರೀರಂಗಪಟ್ಟಣ ದಸರಾ ಮಹೋತ್ಸವವನ್ನು ಈ ಬಾರಿ ವಿನೂತನವಾಗಿ, ಹಾಗೂ ಜನಪರವಾಗಿ ಆಯೋಜಿಸುವ ಮೂಲಕ ಯಶಸ್ವಿಗೊಳಿಸಬೇಕು ಎಂದು ಶ್ರೀರಂಗಪಟ್ಟಣ ಶಾಸಕ ರಮೇಶ್ ಬಂಡಿಸಿದ್ದೇಗೌಡ ತಿಳಿಸಿದ್ದಾರೆ. ದಸರಾ ಮಹೋತ್ಸವದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ದಸರಾ ಕಾರ್ಯಕ್ರಮಗಳು ಕೇವಲ ಉತ್ಸವದ ಆಚರಣೆಗೆ ಸೀಮಿತವಾಗದೆ, ಎಲ್ಲಾ ವರ್ಗದ ಜನರು ಭಾಗವಹಿಸುವಂತಹ ಜನಪರ ಮಹೋತ್ಸವವಾಗಬೇಕು. ಸಾರ್ವಜನಿಕರಿಗೆ ಹೊಸ ಅನುಭವ ನೀಡುವ ರೀತಿಯಲ್ಲಿ ವೈವಿಧ್ಯಮಯ ಹಾಗೂ ವಿನೂತನ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದು ಹೇಳಿದ್ದಾರೆ. ಕ್ರೀಡಾ ದಸರಾವನ್ನು ಪರಿಣಾಮಕಾರಿಯಾಗಿ ಆಯೋಜಿಸಬೇಕು. ತಾಲ್ಲೂಕಿನ ಎಲ್ಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ತಮ್ಮ ಪ್ರತಿಭೆ ಪ್ರದರ್ಶಿಸಲು ವೇದಿಕೆ ಕಲ್ಪಿಸಬೇಕು. ಮೈಸೂರಿನಲ್ಲಿ ಆಯೋಜಿಸುವ ಮಾದರಿಯಲ್ಲಿ ಶ್ರೀರಂಗಪಟ್ಟಣದಲ್ಲಿಯೂ ಯುವ ಸಂಭ್ರಮ ಕಾರ್ಯಕ್ರಮ ನಡೆಸಬೇಕು ಎಂದು ಸೂಚಿಸಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಡಾ.ಕುಮಾರ, ಶ್ರೀರಂಗಪಟ್ಟಣ ದಸರಾ ಮಹೋತ್ಸವವನ್ನು ಈ ಬಾರಿ ಅರ್ಥಪೂರ್ಣವಾಗಿ ಹಾಗೂ ಯಶಸ್ವಿಯಾಗಿ ಆಯೋಜಿಸುವ ಉದ್ದೇಶದಿಂದ ೧೨ ಸಮಿತಿಗಳನ್ನು ರಚಿಸಲಾಗಿದೆ ಎಂದು ತಿಳಿಸಿದ್ದಾರೆ.

**<><*<><>*><>**

**ಇನ್ನು ಸಂಕ್ಷಿಪ್ತ ಸುದ್ದಿಗಳು..**

೧. ದೇಶ ದೇಶಗಳ ಮಧ್ಯೆ, ರಾಷ್ಟ್ರಗಳ ಮಧ್ಯೆ ಭಾವೈಕ್ಯ ಮೂಡಿಸಲು ಹಾಗೂ ಕೌಶಲ್ಯ ರೂಢಿಸಿಕೊಳ್ಳಲು ಕ್ರೀಡೆ ಸಹಕಾರಿಯಾಗಲಿದೆ ಎಂದು ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಹಾಸನ ರಘು ರಾಮನಗರದಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ಕ್ರೀಡಾ ದಿನಾಚಣೆಯಲ್ಲಿ ತಿಳಿಸಿದ್ದಾರೆ.

೨. ಉತ್ತರ ಕನ್ನಡ ಜಿಲ್ಲೆಯಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಪ್ರಸಕ್ತ ಸಾಲಿನ ಕಾಯಂ ವಾಸಿಸುತ್ತಿರುವ ಅಲ್ಪಸಂಖ್ಯಾತರರ ಅಭಿವೃದ್ಧಿಗೆ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯಕ್ಕೆ ಅರ್ಜಿ ಅಹ್ವಾನಿಸಲಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**